ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಪೌಷ್ಠಿಕ ಆಹಾರದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು):-

1329 (1579) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಸುಮಾರು 40 ಸಾವಿರಕ್ಕೂ ಅಧಿಕ ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಂಗನವಾಡಿ ಕೇಂದ್ರಗಳಿಗೆ ಮಹಿಳಾ ಆಹಾರ ತಯಾರಿಕಾ ಘಟಕ (MSPC) ದಿಂದ ಕಳಪೆ ಮಟ್ಟದ ಆಹಾರ ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ MSPC ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಈ MSPC ಗಳು ಸ್ವ-ಸಹಾಯ ಗುಂಪಿನ ಹೆಸರಿನಲ್ಲಿ ಉದ್ಯೋಗಸ್ಥರು ಕಳಪೆ ಮಟ್ಟದ ಆಹಾರ ಪೂರೈಕೆ ಮಾಡುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅದರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; ಬರದೆ ಇದ್ದಲ್ಲಿ ಇದಕ್ಕೆ ಹೊಣೆಗಾರರು ಯಾರು ?